# ಕನ್ನಡ ವಿಶ್ವವಿದ್ಯಾಲಯ, ಹಂಪಿ

ವಿದ್ಯಾರಣ್ಯ-೫೮೩ ೨೭೬

## ಮಾರ್ಚ್ ೧೯, ೨೦೨೦ರ ಶುಕ್ರವಾರದಂದು ನಡೆದ ಕಾರ್ಯಕಾರಿ ಸಮಿತಿ ೨೦೩ನೇ ಸಭೆಯ ನಡವಳಿಗಳು

**ಸಭೆಯಲ್ಲಿ ಉಪಸ್ಥಿತರಿದ್ದವರು:**

| | |
|---|---|
| ೦೧. ಡಾ. ಸ.ಚಿ.ರಮೇಶ, ಮಾನ್ಯ ಕುಲಪತಿಗಳು, ಕ.ವಿ.ಹಂ. | : ಅಧ್ಯಕ್ಷರು |
| ೦೨. ಪ್ರೊ. ಹೆಚ್.ಎಸ್. ರಘುನಾಥ, ಶಿವಮೊಗ್ಗ | : ಸದಸ್ಯರು |
| ೦೩. ಪ್ರೊ. ಜಿ.ಸಿ. ರಾಜಣ್ಣ, ಮೈಸೂರು | : ಸದಸ್ಯರು |
| ೦೪. ಶ್ರೀಮತಿ ನಯನಾ ಎಸ್., ಬೆಂಗಳೂರು | : ಸದಸ್ಯರು |
| ೦೫. ಶ್ರೀ ಪ್ರಶಾಂತ್ ಭೀಮಯ್ಯ, ಮಡಿಕೇರಿ | : ಸದಸ್ಯರು |
| ೦೬. ಶ್ರೀ ಜೈಭೀಮ್, ಕಲಬುರಗಿ | : ಸದಸ್ಯರು |
| ೦೭. ಡಾ. ವೈ.ಎಂ. ಭಜಂತ್ರಿ | : ಸದಸ್ಯರು |
| ೦೮. ಶ್ರೀ ಸಮಿಉಲ್ಲಾ ಖಾನ್, ಬೆಂಗಳೂರು | : ಸದಸ್ಯರು |
| ೦೯. ಡಾ. ವೀರೇಶ್ ಬಡಿಗೇರ, ಡೀನ್, ಭಾಷಾ ನಿಕಾಯ, ಕವಿಹಂ | : ಸದಸ್ಯರು |
| ೧೦. ಡಾ. ಸಿ.ಮಹದೇವ, ಡೀನ್, ಸಮಾಜ ವಿಜ್ಞಾನಗಳ ನಿಕಾಯ, ಕವಿಹಂ | : ಸದಸ್ಯರು |
| ೧೧. ಡಾ. ಕೆ.ರವೀಂದ್ರನಾಥ, ಡೀನ್, ಲಲಿತಕಲೆಗಳ ನಿಕಾಯ, ಕವಿಹಂ | : ಸದಸ್ಯರು |
| ೧೨. ಡಾ. ಮಾಧವ ಪೆರಾಜೆ, ವಿಜ್ಞಾನಗಳ ನಿಕಾಯ, ಕವಿಹಂ | : ಸದಸ್ಯರು |
| ೧೩. ಡಾ. ರಮೇಶ ನಾಯಕ, ಹಣಕಾಸು ಅಧಿಕಾರಿಗಳು, ಕವಿಹಂ | : ವಿಶೇಷ ಆಹ್ವಾನಿತರು |
| ೧೪. ಡಾ. ಎ. ಸುಬ್ಬಣ್ಣ ರೈ, ಕುಲಸಚಿವರು, ಕವಿಹಂ | : ಪದನಿಮಿತ್ತ ಕಾರ್ಯದರ್ಶಿ |

**ಸಭೆಯಲ್ಲಿ ಅನುಪಸ್ಥಿತರಿದ್ದವರು:**

| | |
|---|---|
| ೦೧. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | : ಸದಸ್ಯರು |
| ೦೨. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಣಕಾಸು ಇಲಾಖೆ, ಬೆಂಗಳೂರು | : ಸದಸ್ಯರು |
| ೦೩. ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | : ಸದಸ್ಯರು |
| ೦೪. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | : ಸದಸ್ಯರು |
| ೦೫. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | : ಸದಸ್ಯರು |
| ೦೬. ಪ್ರೊ. ಹೆಚ್.ಎಂ. ಚನ್ನಪ್ಪಗೋಳ, ಬೆಳಗಾವಿ | : ಸದಸ್ಯರು |

ಸಭೆಯ ಆರಂಭದಲ್ಲಿ ಕುಲಸಚಿವರು ಕಾರ್ಯಕಾರಿ ಸಮಿತಿ ಸದಸ್ಯರನ್ನು ಸಭೆಗೆ ಸ್ವಾಗತಿಸಿದರು. ನಂತರ ಇತ್ತೀಚಿಗೆ ನಮ್ಮನ್ನಗಲಿದ ನಾಡಿನ ಹೆಸರಾಂತ ಪತ್ರಕರ್ತರೂ ಸಾಹಿತಿಗಳೂ, ಹಿರಿಯ ಕನ್ನಡಪರ ಹೋರಾಟಗಾರರೂ ಕನ್ನಡ ವಿಶ್ವವಿದ್ಯಾಲಯದ ನಾಡೋಜ ಗೌರವ ಪುರಸ್ಕೃತರೂ ಆದ ಡಾ. ಪಾಟೀಲ ಪುಟ್ಟಪ್ಪ ಅವರ ಆತ್ಮಕ್ಕೆ ಶಾಂತಿ ಕೋರಿ ಸಭೆ ಸಂತಾಪಸೂಚಿಸಿತು.

**ಮಂಡಿಸಲಾದ ಕಾರ್ಯಸೂಚಿಯನ್ನು ಕುರಿತು ಚರ್ಚಿಸಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಳ್ಳಲಾಯಿತು.**

**ವಿಷಯ** : ದಿನಾಂಕ ೦೪.೧೦.೨೦೧೯ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೧ನೇ ಸಭೆಯ ನಡವಳಿಗಳ ಸ್ಥಿರೀಕರಣ ಹಾಗೂ ಅನುಮೋದನೆ ನೀಡುವ ಕುರಿತು. (**ಅನುಬಂಧ-೦೧**)

**ನಿರ್ಣಯ**: ದಿನಾಂಕ ೦೪.೧೦.೨೦೧೯ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೧ನೇ ಸಭೆಯ ನಡವಳಿಯನ್ನು ಸ್ಥಿರೀಕರಿಸಿ ಸಭೆ ಅನುಮೋದನೆ ನೀಡಿತು.

**ವಿಷಯ** : ದಿನಾಂಕ ೦೪.೧೦.೨೦೧೯ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೧ನೇ ಸಭೆಯ ನಡವಳಿಗಳ ಅನುಪಾಲನಾ ವರದಿಗೆ ಅನುಮೋದನೆ ನೀಡುವ ಕುರಿತು. (**ಅನುಬಂಧ-೦೨**)

**ನಿರ್ಣಯ**: ದಿನಾಂಕ ೦೪.೧೦.೨೦೧೯ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೧ನೇ ಸಭೆಯ ನಡವಳಿಗಳ ಅನುಪಾಲನಾ ವರದಿಗೆ ಅನುಮೋದನೆ ನೀಡಿತು.

ವಿಷಯ : ದಿನಾಂಕ ೧೩.೦೧.೨೦೨೦ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೨ನೇ ಸಭೆಯ ನಡವಳಿಗಳ ಸ್ಥಿರೀಕರಣ ಹಾಗೂ ಅನುಮೋದನೆ ನೀಡುವ ಕುರಿತು. **(ಅನುಬಂಧ-೦೧)**

ನಿರ್ಣಯ: ದಿನಾಂಕ ೧೩.೦೧.೨೦೨೦ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೨ನೇ ಸಭೆಯ ನಡವಳಿಯನ್ನು ಸ್ಥಿರೀಕರಿಸಿ ಸಭೆ ಅನುಮೋದನೆ ನೀಡಿತು.

ವಿಷಯ : ದಿನಾಂಕ ೧೩.೦೧.೨೦೨೦ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೨ನೇ ಸಭೆಯ ನಡವಳಿಗಳ ಅನುಪಾಲನಾ ವರದಿಗೆ ಅನುಮೋದನೆ ನೀಡುವ ಕುರಿತು. **(ಅನುಬಂಧ-೦೨)**

ನಿರ್ಣಯ: ದಿನಾಂಕ ೧೩.೦೧.೨೦೨೦ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೨ನೇ ಸಭೆಯ ನಡವಳಿಗಳ ಅನುಪಾಲನಾ ವರದಿಗೆ ಸಭೆ ಅನುಮೋದನೆ ನೀಡಿತು.

೨೦೩.೦೧ **೨೮ನೇ ನುಡಿಹಬ್ಬ-ಘಟಿಕೋತ್ಸವ ಸಂದರ್ಭದ ನಾಡೋಜ ಪದವಿಗಾಗಿ ಸ್ವೀಕೃತವಾಗಿರುವ ಮನವಿಗಳ ಹಿನ್ನೆಲೆಯಲ್ಲಿ ಸಿದ್ಧಪಡಿಸಲಾಗಿರುವ ಗಣ್ಯರ/ಸಾಧಕರ ಪಟ್ಟಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.**

ನಿರ್ಣಯ : ೧. ೨೮ನೇ ನುಡಿಹಬ್ಬದಲ್ಲಿ ನಾಡೋಜ ಪದವಿ ಕೋರಿ ಸಲ್ಲಿಕೆಯಾದ ಮನವಿಗಳನ್ನ ಆಧರಿಸಿ ಸಿದ್ಧಪಡಿಸಲಾದ ೨೮ ಮಂದಿ ಸಾಧಕರ ಪಟ್ಟಿಯನ್ನು ಕುಲಸಚಿವರು ಸಭೆಗೆ ಮಂಡಿಸಿದರು.

೨. ಈಗಾಗಲೇ ಸಿದ್ಧಪಡಿಸಲಾದ ೨೮ ಮಂದಿ ಸಾಧಕರ ಪಟ್ಟಿಯ ಜೊತೆಗೆ ಕಾರ್ಯಕಾರಿ ಸಮಿತಿಯು ಸೂಚಿಸಿದ ೧೨(ಹನ್ನೆರಡು) ಹೆಸರುಗಳನ್ನು ಸದರಿ ಪಟ್ಟಿಗೆ ಸೇರಿಸಿ ಒಟ್ಟು ೪೦(ನಲವತ್ತು)ಮಂದಿ ಸಾಧಕರ ಪಟ್ಟಿಯನ್ನು ಸಿದ್ಧಪಡಿಸಿ ನಾಡೋಜ ಆಯ್ಕೆ ಸಮಿತಿಗೆ ಸಲ್ಲಿಸಲು ಸಭೆ ಸರ್ವಾನುಮತದಿಂದ ಅನುಮೋದನೆ ನೀಡಿತು.

**ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

೨೦೩.೦೨ ಎಂ.ಎಸ್.ಸಿ. ಯೋಗ ಕೋರ್ಸ್ (M.Sc. in Yogic science)ನ್ನು ಆರಂಭಿಸಲು ಕಾರ್ಯಕಾರಿ ಸಮಿತಿ ಅನುಮೋದನೆ ಕುರಿತು.

ನಿರ್ಣಯ : ಈ ಕುರಿತು ಸಭೆಯು ಪರಿಶೀಲಿಸಿ ೨೦೨೦-೨೧ನೇ ಶೈಕ್ಷಣಿಕ ವರ್ಷದಿಂದ ಎಂ.ಎಸ್.ಸಿ. ಯೋಗ ಕೋರ್ಸ್ ಆರಂಭಿಸಲು ಅನುಮೋದನೆ ನೀಡಿತು.

೨೦೩. ೦೩ ದಿನಾಂಕ ೨೭.೦೧.೨೦೨೦ರಂದು ನಡೆದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗ ಅನುಶಾಸನ ರಚನಾ ಸಲಹಾ ಸಮಿತಿ ನಡವಳಿಗಳಿಗೆ ಹಾಗೂ ಕನ್ನಡ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗವನ್ನು ನಿರ್ಬಂಧಿಸುವ ಅನುಶಾಸನಕ್ಕೆ ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಈ ಕುರಿತಂತೆ ಸಭೆಯು ಪರಿಶೀಲಿಸಿ ಅನುಶಾಸನ ರಚನಾ ಸಲಹಾ ಸಮಿತಿ ನಡವಳಿಗಳಿಗೆ ಹಾಗೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗವನ್ನು ನಿರ್ಬಂಧಿಸುವ ಅನುಶಾಸನಕ್ಕೆ ಅನುಮೋದನೆ ನೀಡಿತು.

೨೦೩.೦೪ ದಿನಾಂಕ ೦೯.೦೩.೨೦೨೦ರಂದು ನಡೆದ ಡೀನ್ ಸಮಿತಿ ಸಭೆ ನಡಾವಳಿಗಳಿಗೆ ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡವಳಿಗಳನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೩.೦೫ ದಿನಾಂಕ ೧೮.೦೩.೨೦೨೦ರಂದು ನಡೆದ ಪ್ರಸಾರಾಂಗದ ಸಲಹಾ ಸಮಿತಿ ಸಭೆಯ ನಡವಳಿಗಳಿಗೆ ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಮಂಡಿಸಲಾದ ನಡವಳಿಗಳನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೩.೦೬ ದಿನಾಂಕ ೧೯.೦೩.೨೦೨೦ರಂದು ನಡೆದ ದೂರಶಿಕ್ಷಣ ನಿರ್ದೇಶನಾಲಯದ ಉನ್ನತ ಸಲಹಾ ಸಮಿತಿ ಸಭೆಯ ನಡವಳಿಗಳಿಗೆ ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ಉನ್ನತ ಸಲಹಾ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೩. ೦೭ ವಿವಿಧ ಉಪಸಮಿತಿಗಳ ಪುನಾರಚನೆ ಕುರಿತು.

ನಿರ್ಣಯ : ಈ ಕುರಿತು ಚರ್ಚಿಸಿದ ಸಭೆಯು ೨೮ನೇ ನುಡಿಹಬ್ಬದ ಬಳಿಕ ಉಪಸಮಿತಿಗಳ ಪುನಾರಚನೆ ಕುರಿತು ಮರು ಪರಿಶೀಲಿಸಲು ಮಾನ್ಯ ಕುಲಪತಿಗಳ ವಿವೇಚನೆಗೆ ಬಿಡಲು ತೀರ್ಮಾನಿಸಿತು.

೨೦೩. ೦೮ ಎಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು ಒಳಗೊಂಡಂತೆ ಸರ್ಕಾರಕ್ಕೆ ವಿಶ್ವವಿದ್ಯಾಲಯದ ಆರ್ಥಿಕ ಪರಿಸ್ಥಿತಿಯನ್ನು ಮನವರಿಗೆ ಮಾಡಿಕೊಡಲು ಮಾನ್ಯ ಉಪಮುಖ್ಯಮಂತ್ರಿಗಳೂ/ಉನ್ನತ ಶಿಕ್ಷಣ ಸಚಿವರನ್ನು ಬೇಟಿ ಮಾಡುವ ಬಗ್ಗೆ.

ನಿರ್ಣಯ : ಈ ಕುರಿತು ಸಭೆಯ ಸುದೀರ್ಘವಾಗಿ ಚರ್ಚಿಸಿ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಎಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು ಒಳಗೊಂಡಂತೆ ಸರ್ಕಾರಕ್ಕೆ ವಿಶ್ವವಿದ್ಯಾಲಯದ ಆರ್ಥಿಕ ಪರಿಸ್ಥಿತಿಯನ್ನು ಮನವರಿಗೆ ಮಾಡಿಕೊಡಲು ಮಾನ್ಯ ಉಪಮುಖ್ಯಮಂತ್ರಿಗಳೂ/ಉನ್ನತ ಶಿಕ್ಷಣ ಸಚಿವರನ್ನು ಬೇಟಿಮಾಡಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು.

೨೦೩. ೦೯ ಕುಪ್ಪಳಿ ಕುವೆಂಪು ಕನ್ನಡ ಅಧ್ಯಯನ ಕೇಂದ್ರದಲ್ಲಿ ಪ್ರಸಾರಾಂಗದ ಪುಸ್ತಕ ಮಾರಾಟ ಕೇಂದ್ರವನ್ನು ಆರಂಭಿಸುವ ಬಗ್ಗೆ.

ನಿರ್ಣಯ : ಕುಪ್ಪಳಿ ಕುವೆಂಪು ಕನ್ನಡ ಅಧ್ಯಯನ ಕೇಂದ್ರದಲ್ಲಿ ಪ್ರಸಾರಾಂಗದ ಪುಸ್ತಕ ಮಾರಾಟ ಕೇಂದ್ರವನ್ನು ಆರಂಭಿಸಲು ಸಭೆ ಸರ್ವಾನುಮತದಿಂದ ಅನುಮೋದನೆ ನೀಡಿತು.

೨೦೩. ೧೦ ನೂತನವಾಗಿ ಆರಂಭಿಸಲಾಗುವ ಪ್ರಸಾರಾಂಗದ ಸಂಚಾರಿ ಪುಸ್ತಕ ಮಾರಾಟ ವಾಹನದ ಉದ್ಘಾಟನೆ ಕಾರ್ಯಕ್ರಮವನ್ನು ಏರ್ಪಡಿಸುವ ಕುರಿತು.

ನಿರ್ಣಯ : ಈ ಕುರಿತಂತೆ ಸಭೆಯು ಸುದೀರ್ಘವಾಗಿ ಪರಿಶೀಲಿಸಿ, ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ ಸರ್ಕಾರ ಮತ್ತು ಕನ್ನಡಪರ ಸಂಘಟನೆಗಳ ಸಕಾರದೊಂದಿಗೆ ಅದೇರೀತಿ ಕಾರ್ಯಕಾರಿ ಸಮಿತಿ ಸದಸ್ಯರ ಪಾಲ್ಗೊಳ್ಳುವಿಕೆಯೊಂದಿಗೆ ಸಂಚಾರಿ ಪುಸ್ತಕ ಮಾರಾಟ ವಾಹನದ ಉದ್ಘಾಟನೆ ಕಾರ್ಯಕ್ರಮವನ್ನು ಏರ್ಪಡಿಸಲು ಸಭೆ ಅನುಮೋದನೆ ನೀಡಿತು.

ಹಾಗೂ ಪ್ರಸಾರಾಂಗವನ್ನು ಡಿಜಿಟಲೀಕರಣಗೊಳಿಸಿ ಆನ್‌ಲೈನ್‌ನಲ್ಲಿ ಪುಸ್ತಕಗಳು ದೊರೆಯುವಂತೆ ಮತ್ತು ಮಾರಾಟ ಮಾಡಲು ಅನುಕೂಲವಾಗುವಂತಹ ಸಾಫ್ಟ್‌ವೇರ್‌ನ್ನು ಅಳವಡಿಸಿಕೊಳ್ಳಲು ಸೂಕ್ತ ಕ್ರಮವಹಿಸಲು ತೀರ್ಮಾನಿಸಿತು.

೨೦೩. ೧೧ ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಚಟುವಟಿಗಳ ಸುಧಾರಣೆ ಕುರಿತು.

ನಿರ್ಣಯ : ಈ ಕುರಿತಂತೆ ಸಭೆಯು ಸುದೀರ್ಘವಾಗಿ ಚರ್ಚಿಸಿ ಎಲ್ಲಾ ಅಧ್ಯಯನ ವಿಭಾಗಗಳು ತಮ್ಮ ಶೈಕ್ಷಣಿಕ ಕಾರ್ಯಚಟುವಟಿಕೆಗಳಲ್ಲಿ ಇನ್ನಷ್ಟು ಸುಧಾರಣೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಲು ಸಭೆ ತೀರ್ಮಾನಿಸಿತು.

೨೦೩. ೧೨ ೨೦೧೯-೨೦ನೇ ಸಾಲಿನಲ್ಲಿ ಕನ್ನಡ ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ವಿವಿಧ ಪ್ರಶಸ್ತಿ-ಪುರಸ್ಕಾರಗಳಿಗೆ ಭಾಜನರಾದ ಕುರಿತು.

ನಿರ್ಣಯ : ೨೦೧೯-೨೦ನೇ ಸಾಲಿನಲ್ಲಿ ವಿವಿಧ ಪ್ರಶಸ್ತಿ-ಪುರಸ್ಕಾರಗಳಿಗೆ ಭಾಜನರಾದ ಡಾ. ಎಫ್.ಟಿ. ಹಳ್ಳಿಕೇರೆ, ಪ್ರಾಧ್ಯಾಪಕರು, (ಸಾಹಿತ್ಯ ಶ್ರೀ ಪ್ರಶಸ್ತಿ), ಡಾ. ಅಮರೇಶ ನುಗಡೋಣಿ, ಪ್ರಾಧ್ಯಾಪಕರು, (ಸಾಹಿತ್ಯ ಶ್ರೀ ಪ್ರಶಸ್ತಿ), ಡಾ. ಮಾದವ ಪೆರಾಜೆ, (ಸಾಹಿತ್ಯ ಶ್ರೀ ಪ್ರಶಸ್ತಿ ಹಾಗೂ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಸದಸ್ಯರಾಗಿ ಆಯ್ಕೆ) ಈ ಎಲ್ಲಾ ಪ್ರಾಧ್ಯಾಪಕರಿಗೆ ಹಾಗೂ ಕ್ರೈಸ್ತ ವಿಶ್ವವಿದ್ಯಾಲಯ ಬೆಂಗಳೂರು ಇವರು ಏರ್ಪಡಿಸಿದ ವಿವಿಧ ಸ್ಪರ್ದೆಗಳಲ್ಲಿ ಬಹುಮಾನ ಪಡೆದ ಕನ್ನಡ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಸಭೆ ಅಭಿನಂದಿಸಿತು.

ಕುಲಸಚಿವರ ವಂದನೆಗಳೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು
ಪದನಿಮಿತ್ತ ಕಾರ್ಯದರ್ಶಿ

ಕುಲಪತಿಗಳು
ಅಧ್ಯಕ್ಷರು